ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.19/2019-20 ದಿನಾಂಕ: 23-03-2021

ಕರ್ನಾಟಕದ ರಾಜ್ಯದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ / ಕಿತ್ತೂರು ರಾಣಿ ಚೆನ್ನಮ್ಮ / ಏಕಲವ್ಯ ಮಾದರಿ / ಅಟಲ್ ಬಿಹಾರಿ ವಾಜಪೇಯಿ / ಶ್ರೀಮತಿ ಇಂದಿರಾ ಗಾಂಧಿ / ಡಾ: ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಗಳಲ್ಲಿ 2020ನೇ ಸಾಲಿಗೆ 6ನೇ ತರಗತಿಗೆ ದಾಖಲಾತಿ ಪಡೆಯಲು, ವೇಳಾಪಟ್ಟಿಯನ್ನು ಈ ಕೆಳಗೆ ನೀಡಲಾಗಿದೆ.

ಫಲಿತಾಂಶ ಪ್ರಕಟಣೆ ಮತ್ತು ಮೊದಲನೇ ಸುತ್ತಿನ ಸೀಟು ಹಂಚಿಕೆ

| | | |
|---|---|---|
| 01 | ದಿನಾಂಕ 24-02-2021 ರಂದು ನಡೆದ ವಸತಿ ಶಿಕ್ಷಣ ಶಾಲೆಗಳ ಪ್ರವೇಶಾತಿ ಪರೀಕ್ಷೆಯ ಫಲಿತಾಂಶ ಪ್ರಕಟಣೆ | 23-03-2021 ಸಂಜೆ 4.00 ಗಂಟೆಗೆ |
| 02 | ಇಚ್ಚೆ / ಅಯ್ಕೆಗಳನ್ನು ದಾಖಲಿಸುವುದು. (ಆದ್ಯತಾ ಕ್ರಮದಲ್ಲಿ) ಶಾಲೆಗಳನ್ನು ದಾಖಲಿಸಲು, ಬದಲಾಯಿಸಲು, ಹೊಸದಾಗಿ ಸೇರಿಸಲು ಅವಕಾಶ | 24-03-2021 ಬೆಳಿಗ್ಗೆ 11.00 ರಿಂದ 31-03-2021 ಸಂಜೆ 4.00 ರ ವರೆಗೆ |
| 03 | ಮೊದಲನೇ ಸುತ್ತಿನ ಸೀಟು ಹಂಚಿಕೆಯ ಫಲಿತಾಂಶ ಪ್ರಕಟಣೆ | 03-04-2021 ಬೆಳಿಗ್ಗೆ 11.00 ಗಂಟೆಗೆ |
| 04 | ಮೊದಲನೇ ಸುತ್ತಿನಲ್ಲಿ ಸೀಟು ಹಂಚಿಕೆಯಾದ ಅಭ್ಯರ್ಥಿಗಳು ಶಾಲೆಗಳಲ್ಲಿ ಪ್ರವೇಶ ಪಡೆಯುವುದು | 05-04-2021 ರಿಂದ 10-04-2021 ರ ವರೆಗೆ |

1. ಈ ಮೇಲ್ಕಂಡ ವೇಳಾಪಟ್ಟಿಯು ಕೋವಿಡ್ ಹಿನ್ನಲೆಯಲ್ಲಿ ಸರ್ಕಾರದ ಮಾರ್ಗಸೂಚಿಗಳ ಅನುಸಾರ ಬದಲಾವಣೆಗೆ ಒಳಪಟ್ಟಿರುತ್ತದೆ.
2. ಆಯ್ಕೆಯಾದ ಅಭ್ಯರ್ಥಿಗಳು ಶಾಲೆಗಳಲ್ಲಿ ಪ್ರವೇಶ ಪಡೆಯುವ ಮೊದಲು ಕೋವಿಡ್-19 ನೆಗೆಟೀವ್ ವರದಿ ಸಲ್ಲಿಸುವುದು ಕಡ್ಡಾಯವಾಗಿರುತ್ತದೆ.
3. ಅಭ್ಯರ್ಥಿಗಳು ಯಾವ ವಸತಿ ಶಾಲೆಯ ಮುಖಾಂತರ ಅರ್ಜಿ ಸಲ್ಲಿಸಿರುತ್ತಾರೊ, ಅದೇ ವಸತಿ ಶಾಲೆಯ ಮುಖಾಂತರ ತಮ್ಮ ಸ್ವಂತ ಜಿಲ್ಲೆಯಲ್ಲಿರುವ ವಸತಿ ಶಾಲೆಗಳಲ್ಲಿನ ಸೀಟುಗಳ ಲಭ್ಯತೆಯನ್ನು ಗಮನಿಸಿ ನಮೂದಿಸಬೇಕು.
4. ವಸತಿ ಶಾಲೆಗಳ ನಮೂದಿಸುವ ಕ್ರಮ - ಯಾವ ಶಾಲೆಗಳಲ್ಲಿ ದಾಖಲಾತಿ ಬಯಸುತ್ತಾನೋ/ಳೋ, ಅಂತಹ ಶಾಲೆಗಳನ್ನು ಆದ್ಯತಾ ಕ್ರಮದಲ್ಲಿ ನಮೂದಿಸಬೇಕು
5. ಆದ್ಯತಾ ಕ್ರಮದಲ್ಲಿ ದಾಖಲಿಸುವ ಶಾಲೆಗಳನ್ನು ಮಾತ್ರ ಹಂಚಿಕೆಗೆ ಪರಿಗಣಿಸಲಾಗುವುದು. ಪ್ರವೇಶ ಪರೀಕ್ಷೆಯಲ್ಲಿ ಗಳಿಸಿದ ಮೆರಿಟ್ ಆಧಾರದ ಮೇಲೆ ಶಾಲೆಗಳ ಹಂಚಿಕೆಯನ್ನು ಮಾಡಲಾಗುವುದು.

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru – 560 012.
Phone: 080-2356 4583, 2336 1786, Fax: 080-2346 1576
e-mail : keauthority-ka@nic.in Website : http://kea.kar.nic.in

6. ಅಭ್ಯರ್ಥಿಗಳ ಪೋಷಕರು ತಮ್ಮ ಜಿಲ್ಲೆಯಲ್ಲಿ ಸ್ಥಾಪಿಸಲಾಗಿರುವ ವಸತಿ ಶಿಕ್ಷಣ ಶಾಲೆಗಳ ವಿವರಗಳನ್ನು ಪಡೆದು ಕೊಂಡು, ತಮ್ಮ ಮಕ್ಕಳನ್ನು ಯಾವ ಶಾಲೆಗೆ ಸೇರಿಸಬೇಕು ಎಂಬುದನ್ನು ತೀರ್ಮಾನಿಸಿ ಆದ್ಯತಾ ಕ್ರಮದಲ್ಲಿ ನಮೂದಿಸಬೇಕು.

7. ಅಭ್ಯರ್ಥಿಗಳು ತಾವು ದಾಖಲಿಸುವ ಶಾಲೆಗಳನ್ನು ಮಾತ್ರ ಸೀಟು ಹಂಚಿಕೆಗೆ ಪರಿಗಣಿಸಲಾಗುವುದು.

8. **ಜಿಲ್ಲೆಗೆ ಸೀಮಿತವಾದ ಮೊದಲನೇ ಸುತ್ತಿನ ಸೀಟು ಹಂಚಿಕೆ:–** ಪ್ರವೇಶ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಪಡೆದ ಅಂಕಗಳ ಆಧಾರದ ಮೇಲೆ ಮೆರಿಟ್ ಪಟ್ಟಿಯನ್ನು ಸಿದ್ಧಪಡಿಸಿ, ಮೊದಲ ಸುತ್ತಿನ ಜಿಲ್ಲೆಗೆ ಸೀಮಿತವಾದ ಆನ್‌ಲೈನ್ ಸೀಟ್ ಹಂಚಿಕೆಯನ್ನು, ಅಭ್ಯರ್ಥಿಯು ನೀಡಿದ ಶಾಲಾವಾರು ಆದ್ಯತೆ ಹಾಗೂ ಸರ್ಕಾರವು ನಿಗಧಿಪಡಿಸಿದ ಮೀಸಲಾತಿಗನುಗುಣವಾಗಿ ಹಂಚಿಕೆ ಮಾಡಲಾಗುವುದು. ಸೀಟು ಹಂಚಿಕೆಯ ಫಲಿತಾಂಶವನ್ನು ವೆಬ್‌ಸೈಟ್ http://kea.kar.nic.in ನಲ್ಲಿ ಪ್ರಕಟಿಸಲಾಗುವುದು. ಮೊದಲ ಸುತ್ತಿನಲ್ಲಿ ಸೀಟು ಹಂಚಿಕೆ ಪಡೆದ ಅಭ್ಯರ್ಥಿಗಳು ನಿಗದಿತ ಸಮಯದೊಳಗೆ ಎಲ್ಲಾ ಮೂಲ ದಾಖಲಾತಿಗಳೊಂದಿಗೆ ಸಂಬಂಧಿಸಿದ ವಸತಿ ಶಾಲೆಗೆ ತಪ್ಪದೆ ಪ್ರವೇಶ ಪಡೆಯತಕ್ಕದ್ದು.

9. ಮೊದಲನೇ ಸುತ್ತಿನಲ್ಲಿ ಹಂಚಿಕೆಯಾಗದೆ ಖಾಲಿ ಉಳಿದ ಸೀಟುಗಳು ಹಾಗೂ ಮೊದಲನೇ ಸುತ್ತಿನಲ್ಲಿ ಹಂಚಿಕೆ ಪಡೆದು ಶಾಲೆಗೆ ದಾಖಲಾಗದೇ ಉಳಿದ ಸೀಟುಗಳನ್ನು ಕ್ರೂಢೀಕರಿಸಿ, ಮುಂದಿನ ಸುತ್ತಿನ ಜಿಲ್ಲೆಗೆ ಸೀಮಿತವಾದ ಆನ್‌ಲೈನ್ ಸೀಟು ಹಂಚಿಕೆಯನ್ನು ಯಾವುದೇ ಸೀಟು ಹಂಚಿಕೆಯಾಗದೇ ಇರುವ ಅಭ್ಯರ್ಥಿಗಳಿಗೆ ಮಾತ್ರ ಕೌನ್ಸಲಿಂಗ್ ನಡೆಸಲಾಗುವುದು. ಸೀಟು ಹಂಚಿಕೆಯ ಫಲಿತಾಂಶವನ್ನು ವೆಬ್‌ಸೈಟ್ http://kea.kar.nic.in ನಲ್ಲಿ ಪ್ರಕಟಿಸಲಾಗುವುದು. ಈ ಸುತ್ತಿನಲ್ಲಿ ಸೀಟು ಹಂಚಿಕೆ ಪಡೆದ ಅಭ್ಯರ್ಥಿಗಳು ನಿಗದಿತ ಸಮಯದೊಳಗೆ ಎಲ್ಲಾ ಮೂಲ ದಾಖಲಾತಿಗಳೊಂದಿಗೆ ಸಂಬಂಧಿಸಿದ ವಸತಿ ಶಾಲೆಗೆ ತಪ್ಪದೆ ಪ್ರವೇಶ ಪಡೆಯತಕ್ಕದ್ದು.

ಎರಡನೇ ಸುತ್ತಿನ ಸೀಟು ಹಂಚಿಕೆ

| | | |
|---|---|---|
| 01 | ಸೀಟುಗಳ ಲಭ್ಯತೆ ವಿವರ ಪ್ರಕಟಣೆ | 19-04-2021 |
| 02 | ಎರಡನೇ ಸುತ್ತಿನ ಸೀಟು ಹಂಚಿಕೆಯ ಫಲಿತಾಂಶ ಪ್ರಕಟಣೆ | 22-04-2021 ಬೆಳಿಗ್ಗೆ 11.00 ಗಂಟೆಗೆ |
| 03 | ಎರಡನೇ ಸುತ್ತಿನಲ್ಲಿ ಸೀಟು ಹಂಚಿಕೆಯಾದ ಅಭ್ಯರ್ಥಿಗಳು ಶಾಲೆಗಳಲ್ಲಿ ಪ್ರವೇಶ ಪಡೆಯುವುದು | 23-04-2021 ರಿಂದ 28-04-2021 ರ ವರೆಗೆ |

ಎರಡನೇ ಸುತ್ತಿನ ಸೀಟು ಹಂಚಿಕೆಯ ನಂತರ ಉಳಿಕೆಯಾಗುವ ಸೀಟುಗಳ ಆಧಾರದ ಮೇಲೆ ಮುಂದಿನ ಹಂತದ ಸೀಟು ಹಂಚಿಕೆಯ ಬಗ್ಗೆ ವಿವರಗಳನ್ನು ಪ್ರಕಟಿಸಲಾಗುವುದು.

ಸಹಿ/-

ಕಾರ್ಯನಿರ್ವಾಹಕ ನಿರ್ದೇಶಕರು